ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

## ಪತ್ರಿಕಾ ಪ್ರಕಟಣೆ

ದಿನಾಂಕ 05/04/2019.

ದೊಡ್ಡಬಳ್ಳಾಪುರ ತಾಲ್ಲೂಕು, ಬೀಡಿಗೆರೆ ಗ್ರಾಮದ ಸಿವಿಲ್ ಕಂಟ್ರಾಕ್ಟರ್ ರವರು ಕೊಡಿಗೆಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಮಾದಗೊಂಡನಹಳ್ಳಿ ಗ್ರಾಮಕ್ಕೆ ನೀರುಗಾವಲು ಕಾಮಗಾರಿ ನಡೆಸಿ, ಕಾಮಗಾರಿಯನ್ನು ಮುಕ್ತಾಯ ಮಾಡಿದ್ದು, ಕಾಮಗಾರಿಯ ನಾಮಿನಲ್ ಮಸ್ಟರ್ ರೋಲ್‌ನ (ಎನ್.ಎಂ.ಆರ್) ಮೊತ್ತ ಮಂಜೂರು ಮಾಡಲು ಶ್ರೀ.ಕೃಷ್ಣಯ್ಯ, ಪಂಚಾಯಿತಿ ಅಭಿವೃದ್ದಿ ಅಧಿಕಾರಿ, ಕೊಡಿಗೆಹಳ್ಳಿ ಗ್ರಾಮ ಪಂಚಾಯತಿ ರವರು ರೂ.48,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:05/04/2019 ರಂದು ದೂರುದಾರರಿಂದ ಶ್ರೀ.ಕೃಷ್ಣಯ್ಯ ರವರು ರೂ.33,000/- ಲಂಚದ ಹಣವನ್ನು ಪಡೆಯುವಾಗ ಬೆಂಗಳೂರು ಗ್ರಾಮಾಂತರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿಯನ್ನು ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.